ಅ) ಬಿಜಾಪುರ ಜಿಲ್ಲೆಯಲ್ಲಿ ಪ್ರಾಥಮಿಕ ಶಾಲಾ ಗೌರವ ಶಿಕ್ಷಕರಾಗಿ 1988 ರಿಂದ ಸೇವೆ ಸಲ್ಲಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು?

ಆ) ಸದರಿ ಶಿಕ್ಷಕರಿಗೆ ಸರ್ಕಾರದಿಂದ ಗೌರವಧನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಹಾಗಿದ್ದಲ್ಲಿ ಗೌರವಧನ ನೀಡುವ ಬಗ್ಗೆ ಮತ್ತು ಖಾಯಂ ಮಾಡುವ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು):

ಅ) ಮಂಡಲ ಪಂಚಾಯಿತಿಯವರು 225 ಗೌರವ ಶಿಕ್ಷಕರನ್ನು ನೇಮಕ ಮಾಡಿಕೊಂಡಿರುತ್ತಾರೆ. ಈ ನೇಮಕಾತಿಗಳನ್ನು ಸರ್ಕಾರದ ವತಿಯಿಂದಾಗಲೀ ಅಥವಾ ಜಿಲ್ಲಾ ಪಂಚಾಯಿತ್‌ಗಳ ವತಿಯಿಂದಾಗಲೀ ಮಾಡಿರುವುದಿಲ್ಲ.

ಆ) ಇಲ್ಲ.

ಇ) ಮಂಡಲ ಪಂಚಾಯಿತಿಯವರು ನೇಮಕಾತಿ ಹಾಗೂ ಮೀಸಲಾತಿ ನಿಯಮಗಳನ್ನು ಅನುಸರಿಸದೇ ಗೌರವ ಶಿಕ್ಷಕರನ್ನು ನೇರವಾಗಿ ನೇಮಕ ಮಾಡಿಕೊಂಡಿರುವುದರಿಂದ, ಸದರಿಯವರಿಗೆ ಸರ್ಕಾರವು ಗೌರವಧನ ನೀಡುವ ಹಾಗೂ ಅವರನ್ನು ಖಾಯಂ ಮಾಡುವ ಪ್ರಶ್ನೆ ಉದ್ಭವಿಸುವುದಿಲ್ಲ.

ಯಡಹಳ್ಳಿ ಗ್ರಾಮದಲ್ಲಿ ಪಕ್ಷಿಧಾಮ ಅಭಿವೃದ್ಧಿ ಕುರಿತು :

1260 - ಶ್ರೀ ಜಿ.ಬಿ. ಪಾಟೀಲ್ (ಬೀಳಗಿ) : ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವವೆ?

ಅ) ಬಿಜಾಪುರ ಜಿಲ್ಲೆಯ ಬೀಳಗಿ ತಾಲ್ಲೂಕಿನ ಯಡಹಳ್ಳಿ ಗ್ರಾಮದಲ್ಲಿ ಪಕ್ಷಿಧಾಮ ಅಭಿವೃದ್ಧಿ ಪಡಿಸಲು ಯೋಜನೆ ಮಂಜೂರುಮಾಡಿರುವುದು ಪರಿಶೀಲನೆಯಲ್ಲಿದೆಯೆ?

ಆ) ಹಾಗಿದ್ದಲ್ಲಿ ಈ ಪಕ್ಷಿಧಾಮವನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು?

ಇ) ಈ ಪಕ್ಷಿಧಾಮದ ಬೆಳವಣಿಗೆಗೆ ಬಿಡುಗಡೆ ಮಾಡಿದ ಹಣವೆಷ್ಟು?

ಈ) ಈ ವರ್ಷದ ಆಯವ್ಯಯದಲ್ಲಿ ಈ ಪಕ್ಷಿಧಾಮದ ಅಭಿವೃದ್ಧಿಗೆ ಎಷ್ಟು ಹಣ ನಿಗದಿಗೊಳಿಸಲಾಗಿದೆ?

ಶ್ರೀ ಹೆಚ್.ವೈ. ಮೇಟಿ (ಅರಣ್ಯ ಸಚಿವರು) :

ಅ) ಇಲ್ಲ

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ

ಈ) ಉದ್ಭವಿಸುವುದಿಲ್ಲ

ನಾಗರಹೊಳೆ ಅರಣ್ಯದಲ್ಲಿರುವ ಗಿರಿಜನರನ್ನು ಸ್ಥಳಾಂತರಗೊಳಿಸುವ ಬಗ್ಗೆ

925 - ಶ್ರೀ ಹೆಚ್.ಡಿ. ಬಸವರಾಜು (ವೀರಾಜಪೇಟೆ) : ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಾಗರಹೊಳೆ ಅರಣ್ಯದಲ್ಲಿರುವ ಗಿರಿಜನರನ್ನು ಸ್ಥಳಾಂತರಗೊಳಿಸುವ ಬಗ್ಗೆ ಸರ್ಕಾರ ಯಾವುದಾದರೂ ನಿರ್ದಿಷ್ಟ ಯೋಜನೆ ಹಾಕಿಕೊಂಡಿದೆಯೇ, ಹಾಗಿದ್ದರೆ ಇದರ ಬಗ್ಗೆ ಅನುಷ್ಠಾನಕ್ಕೆ ಏನಾದರೂ ಸಮಯವನ್ನು ನಿಗದಿಪಡಿಸಿದೆಯೇ ಹಾಗಿದ್ದಲ್ಲಿ ಅವುಗಳ ಬಗ್ಗೆ ವಿವರಣೆ ನೀಡುವುದು.